0137

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ಮಂಡಿಸಿರುವ ನಿಯಮ 72 ರ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

ವಿಷಯ: ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಆಸ್ತಿ ತೆರಿಗೆ ಸಂಗ್ರಹಿಸುವುದರಲ್ಲಿ ಅಧಿಕಾರಿಗಳ ನಿರ್ಲಕ್ಷ್ಯತೆ ವಹಿಸುತ್ತಿರುವ ಮತ್ತು ತೆರಿಗೆ ಆದಾಯ ಕುಂಠಿತವಾಗುತ್ತಿರುವ ವಿಚಾರದ ಬಗ್ಗೆ.

----

ಉತ್ತರ: ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರನ್ವಯ ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕೃಷಿಯೇತರ ಆಸ್ತಿಗಳ ಮೇಲೆ ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಅನುಸೂಚಿ-IV ರಲ್ಲಿ ಗ್ರಾಮ ಪಂಚಾಯತಿಗಳು ವಿಧಿಸಬಹುದಾದ ತೆರಿಗೆಗಳ ಬಗ್ಗೆ ವಿವರಗಳನ್ನು ನೀಡಲಾಗಿದೆ. ತೆರಿಗೆ ನಿರ್ಧರಣೆ, ಪರಿಷ್ಕರಣೆ ಹಾಗೂ ವಸೂಲಾತಿ ಬಗ್ಗೆ ನಿಯಮಗಳು/ಸುತ್ತೋಲೆಗಳಲ್ಲಿ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಗ್ರಾಮ ಪಂಚಾಯತಿಗಳು ತಮ್ಮ ಸ್ವಂತ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಹೆಚ್ಚಿನ ಪ್ರಮಾಣದಲ್ಲಿ ಜನರಿಗೆ ಅವಶ್ಯವಿರುವ ಸೇವೆಗಳನ್ನು ಒದಗಿಸಬೇಕೆಂಬುದು ಸರ್ಕಾರದ ಆಶಯವಾಗಿದೆ.

ಗ್ರಾಮ ಪಂಚಾಯತಿಗಳ ತೆರಿಗೆ ನಿರ್ಧರಣೆ, ಪರಿಷ್ಕರಣೆ ಹಾಗೂ ವಸೂಲಾತಿ ಪ್ರಕ್ರಿಯೆ ಸಮರ್ಪಕವಾಗಿ ಕೈಗೊಳ್ಳುವ ಬಗ್ಗೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಪಾತ್ರವನ್ನು ನಿರ್ದಿಷ್ಟಪಡಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ತೆರಿಗೆ ನಿರ್ಧರಣೆ/ಪರಿಷ್ಕರಣೆ ಬಗ್ಗೆ ಗ್ರಾಮ ಪಂಚಾಯತಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಪ್ರಕ್ರಿಯೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲು ತಿಳಿಸಲಾಗಿದೆ. ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ರಾಜ್ಯ ಮಟ್ಟದ ಸಭೆಯಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ತೆರಿಗೆ ಸಂಗ್ರಹದ ಮಹತ್ವದ ಬಗ್ಗೆ ಮನವರಿಕೆ ಮಾಡಿರುತ್ತಾರೆ.

ಗ್ರಾಮ ಪಂಚಾಯತಿ ವ್ಯಾಪ್ತಿಯ ಭೂಮಿ ಮತ್ತು ಕಟ್ಟಡಗಳ ಮೇಲೆ ತೆರಿಗೆ ಸಂಗ್ರಹಣೆ ಮಾಡಲು ಸರ್ಕಾರದಿಂದ ಮತ್ತು ಜಿಲ್ಲಾ ಪಂಚಾಯತಿಗಳಲ್ಲಿ ಪ್ರತಿ ಮಾಹೆ ಪ್ರಗತಿ ಪರಿಶೀಲನಾ ಸಭೆಗಳನ್ನು ಜರುಗಿಸಿ, ಗ್ರಾಮ ಪಂಚಾಯತಿವಾರು ಗುರಿ ನಿಗದಿಪಡಿಸಿ, ವಸೂಲಿ ಮಾಡಲು ಕ್ರಮ ವಹಿಸಲಾಗುತ್ತಿದೆ. ತೆರಿಗೆ ವಸೂಲಾತಿಗಾಗಿ ಗ್ರಾಮಗಳಲ್ಲಿ ಡಂಗುರ ಸಾರಿಸಿ, ಜಾಥಾ ಕಾರ್ಯಕ್ರಮಗಳನ್ನು ಆಯೋಜಿಸಿ ಜನರಿಗೆ ತೆರಿಗೆ ಕಟ್ಟಿಸಲು ಉತ್ತೇಜಿಸುವುದು ಹಾಗೂ ಕರ ವಸೂಲಾತಿ ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ.

2020-21ನೇ ಸಾಲಿನಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳು ಪ್ರಸಕ್ತ ಸಾಲಿನ ಬೇಡಿಕೆಗೆ ಅನುಗುಣವಾಗಿ ಶೇ.88 ರಷ್ಟು ತೆರಿಗೆಯನ್ನು ವಸೂಲಿ ಮಾಡಿರುತ್ತವೆ.

ಸಂಖ್ಯೆ: ಗ್ರಾಅಪ 359 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು